ಪ್ರಜಾ ವಾಣಿ
ಕರ್ನಾಟಕದ ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

# ‘ಡೀಮ್ಡ್ ಅರಣ್ಯ ಕಡಿತ ಬೇಡ’

ಬೆಂಗಳೂರು: ರಾಜ್ಯದಲ್ಲಿರುವ ಡೀಮ್ಡ್ ಅರಣ್ಯದ ವ್ಯಾಪ್ತಿಯನ್ನು ಯಾವುದೇ ಕಾರಣಕ್ಕೂ ಕಡಿತಗೊಳಿಸಬಾರದು ಎಂದು ಪರಿಸರ ಸಂಘಟನೆಗಳು ಅರಣ್ಯ ಇಲಾಖೆಯನ್ನು ಒತ್ತಾಯಿಸಿವೆ.

ಈ ಸಂಬಂಧ ಸಂಘಟನೆಗಳ ಪ್ರತಿನಿಧಿಗಳ ನಿಯೋಗ ಅರಣ್ಯ ಸಚಿವ ಬಿ. ರಮಾನಾಥ ರೈ, ಇಲಾಖೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಮಹೇಂದ್ರ ಜೈನ್ ಅವರಿಗೆ ಮನವಿ ಸಲ್ಲಿಸಿದೆ.

‘ಪುನರ್ ರಚನೆ ಹೆಸರಿನಲ್ಲಿ ಈಗಾಗಲೇ ಡೀಮ್ಡ್ ಅರಣ್ಯ ವ್ಯಾಪ್ತಿಯನ್ನು 10 ಲಕ್ಷ ಹೆಕ್ಟೇರ್‌ನಿಂದ 5 ಲಕ್ಷ ಹೆಕ್ಟೇರ್‌ಗೆ ಕುಗ್ಗಿಸಲಾಗಿದೆ. ಅರಣ್ಯ ಸಂರಕ್ಷಣೆ ವಿಚಾರದಲ್ಲಿ ಪಕ್ಷಗಳು ಹಸ್ತಕ್ಷೇಪ ಮಾಡಬಾರದು’ ಎಂದು ಆಗ್ರಹಿಸಿದೆ.

ಪಶ್ಚಿಮ ಘಟ್ಟ ಕಾರ್ಯಪಡೆಯ ಮಾಜಿ ಅಧ್ಯಕ್ಷ ಅನಂತ ಹೆಗಡೆ ಅಶೀಸರ, ವಿಜ್ಞಾನಿ ಡಾ. ಟಿ.ವಿ. ರಾಮಚಂದ್ರ, ವೃಕ್ಷಲಕ್ಷ ಆಂದೋಲನದ ಸಂಚಾಲಕ ಬಿ.ಎಚ್. ರಾಘವೇಂದ್ರ, ರವಿ ಹನಿಯ, ಕೆ. ವೆಂಕಟೇಶ್ ನಿಯೋಗದಲ್ಲಿದ್ದರು.